ಅ) ಐತಿಹಾಸಿಕ ಸ್ಥಳವಾದ ಅಬಲೂರು ಹಾಗೂ ಮೈಸೂರು ಗ್ರಾಮಗಳಲ್ಲಿ ಸರ್ವಜ್ಞನ ಪುತ್ಥಳಿಯನ್ನು ನಿರ್ಮಿಸಲು ಸರ್ಕಾರ ತೀರ್ಮಾನಿಸಿದೆಯೆ?

ಇ) ಸರ್ವಜ್ಞನ ಪುತ್ಥಳಿ ನಿರ್ಮಾಣ ಕಾರ್ಯವನ್ನು ಅಬಲೂರು ಹಾಗೂ ಮೈಸೂರಲ್ಲಿ ಯಾವಾಗ ಪೂರ್ಣಗೊಳಿಸಲಾಗುವುದು?

ಶ್ರೀಮತಿ ರಾಣಿ ಸತೀಶ್ (ಕನ್ನಡ ಮತ್ತು ಸಂಸ್ಕೃತಿ ರಾಜ್ಯ ಸಚಿವರು) :

ಅ) ಬಂದಿದೆ

ಆ) ಹೌದು

ಇ) 1. ಸರ್ವಜ್ಞನ ಕಂಚಿನ ಪುತ್ಥಳಿ ಸ್ಥಾಪಿಸಲು ಸಮರ್ಥ ಶಿಲ್ಪಿಗಳಿಂದ ನಿರ್ಮಾಣಕ್ಕೆ ತಗಲುವ ವೆಚ್ಚದ ಬಗ್ಗೆ ಟೆಂಡರ್ ಕರೆಯಲಾಗಿದೆ.

2. ಪುತ್ಥಳಿಗಳ ನಿರ್ಮಾಣ ಕಾರ್ಯಕ್ಕಾಗಿ ರೂ 14.00 ಲಕ್ಷಗಳನ್ನು ಈಗಾಗಲೇ ಕರ್ನಾಟಕ ಶಿಲ್ಪಕಲಾ ಅಕಾಡೆಮಿಗೆ ಬಿಡುಗಡೆ ಮಾಡಿದೆ.

3. ಪುತ್ಥಳಿ ಸ್ಥಾಪನೆಯನ್ನು ಆರು ತಿಂಗಳ ಅವಧಿಯಲ್ಲಿ ಪೂರ್ಣಗೊಳಿಸಲಾಗುವುದು

ಸರ್ವಜ್ಞನ ಜನ್ಮಸ್ಥಳ ಅಬಲೂರಿನಲ್ಲಿ ಮಹಾದ್ವಾರ ನಿರ್ಮಿಸುವುದು

1014 (1123) ಶ್ರೀ ಬಿ. ಹೆಚ್. ಬನ್ನಿಕೋಡ್ (ಹಿರೇಕೆರೂರು) : ಮಾನ್ಯ ಪ್ರವಾಸೋದ್ಯಮ ಹಾಗೂ ಹಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ

ಅ) ಸರ್ವಜ್ಞನ ಜನ್ಮಸ್ಥಳವಾದ ಅಬಲೂರು ಗ್ರಾಮದಲ್ಲಿ ಮಹಾದ್ವಾರ ನಿರ್ಮಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

ಆ) ಅಬಲೂರಿಗೆ ಅಲದಕಟ್ಟೆ, ದೂಪದಹಳ್ಳಿಗೆ ನೂಲಗೇರಿ ಮಾರ್ಗವಾಗಿ ರಸ್ತೆ ನಿರ್ಮಿಸಿ ಡಾಂಬರೀಕರಣ ಮಾಡುವ ಪ್ರಸ್ತಾಪ ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು?

ಶ್ರೀ ಆರ್. ರೋಷನ್ ಬೇಗ್ (ಪ್ರವಾಸೋದ್ಯಮ ಹಾಗೂ ಹಜ್ ಸಚಿವರು) :

ಅ) ಈ ಪ್ರಸ್ತಾವನೆ ಸರ್ಕಾರದ ಮುಂದಿಲ್ಲ

ಆ) ಪ್ರೇಕ್ಷಣೀಯ ಸ್ಥಳಗಳಿಗೆ ಹೋಗುವ ಕೂಡುರಸ್ತೆ ಅಭಿವೃದ್ಧಿ ಯೋಜನೆ ಅಡಿಯಲ್ಲಿ ಈ ಬಗ್ಗೆ ಪರಿಶೀಲಿಸಲಾಗುವುದು.

ಹೊಸ ಜಿಲ್ಲಾ ಕೇಂದ್ರ ಸ್ಥಳಗಳಿಗೆ ಜಿಲ್ಲಾ ನ್ಯಾಯಾಲಯ ಸ್ಥಾಪನೆ

1015 (1124) ಶ್ರೀ ಬಿ. ಹೆಚ್. ಬನ್ನಿಕೋಡ್ (ಹಿರೇಕೆರೂರು) : ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?